ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 27–07–2018**

ಪತ್ರಿಕಾ ಪ್ರಕಟಣೆ

# ಚರ್ಕಳಂ ಅಬ್ದುಲ್ಲ ಅವರ ನಿಧನಕ್ಕೆ ಸಂತಾಪ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಕಾಸರಗೋಡಿನ ಚರ್ಕಳಂ ಅಬ್ದುಲ್ಲ ಅವರ ನಿಧನಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಎಸ್.ಜಿ.ಸಿದ್ಧರಾಮಯ್ಯ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಚರ್ಕಳಂ ಅಬ್ದುಲ್ಲ ಅವರು ಕಾಸರಗೋಡಿನ ಮಂಜೇಶ್ವರ ಕ್ಷೇತ್ರದಿಂದ ಕೇರಳ ವಿಧಾನಸಭೆಗೆ 1987 ರಲ್ಲಿ ಆಯ್ಕೆ ಮೊಟ್ಟ ಮೊದಲಿಗೆ ಕೇರಳ ವಿಧಾನಸಭೆಯಲ್ಲಿ ಕನ್ನಡದ ಧ್ವನಿ ಮೊಳಗಿಸಿದ ಹೆಮ್ಮೆಯ ಕನ್ನಡಿಗರು.

ಕಾಸರಗೋಡಿನಲ್ಲಿ ಕನ್ನಡ ಇವತ್ತಿಗೂ ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳಲು ಸಾಧ್ಯವಾಗಿದ್ದರೆ ಅದು ಚರ್ಕಳಂ ಅಬ್ದುಲ್ಲ ಅಂತಹವರ ಹೋರಾಟದ ಫಲವಾಗಿ ಎನ್ನುವುದು ಪ್ರತಿಯೊಬ್ಬ ಕನ್ನಡಿಗನೂ ಅರಿಯಬೇಕಾದ ಸಂಗತಿ. ಸಚಿವರಾಗಿ, ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯ ಅಧ್ಯಕ್ಷರಾಗಿ ಜನಪರ ಸೇವೆಯಿಂದ ಎಲ್ಲರಿಗೂ ಬೇಕಾದವರಾಗಿದ್ದ ಚರ್ಕಳಂ ಅಬ್ದುಲ್ಲರವರು ಜನಪ್ರತಿನಿಧಿಯೊಬ್ಬರು ಸಾರ್ವಜನಿಕ ಕ್ಷೇತ್ರದಲ್ಲಿ ಯಾವ ರೀತಿ ಇರಬೇಕೆನ್ನುವುದಕ್ಕೆ ಮಾದರಿಯಂತಿದ್ದರು.

ಅವರು ಇಂದು ನಮ್ಮ ನಡುವೆ ಇಲ್ಲವಾದರೂ ಅವರ ಹೋರಾಟದ ನಡೆ ನಮ್ಮೆಲ್ಲರಿಗೂ ದಾರಿ ದೀವಿಗೆಯಂತಿರುತ್ತದೆ. ಕನ್ನಡ ಅಬಿವೃದ್ಧಿ ಪ್ರಾಧಿಕಾರ ಹಾಗೂ ಕನ್ನಡಿಗರೆಲ್ಲರ ಪರವಾಗಿ ಚರ್ಕಳ ಅಬ್ದುಲ್ಲ ಅವರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತೇನೆ.

ಶ್ರೀಯುತರ ನಿಧನದಿಂದ ಉಂಟಾಗಿರುವ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಭಗವಂತನು ನೀಡಲಿ ಎಂದು ತಮ್ಮ ಶೋಕಸಂದೇಶದಲ್ಲಿ ತಿಳಿಸಿದ್ದಾರೆ.

# ಮಧುಮೇಹ ರೋಗಿಗಳಿಗೆ ಐದು ದಿನಗಳ ತರಬೇತಿ ಕಾರ್ಯಕ್ರಮ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಶ್ರೀ ಜಯಚಾಮರಾಜೇಂದ್ರ ಭಾರತೀಯ ವೈದ್ಯಕೀಯ ಸಂಸ್ಥೆ ಜಂಟಿಯಾಗಿ ಸ್ವಸ್ಥವೃತ್ತ ವಿಭಾಗದಿಂದ ಉಚಿತ ಯೋಗ ಶಿಬಿರ ಹಾಗೂ ಆರೋಗ್ಯ ತಿಳುವಳಿಕೆ ಕಾರ್ಯಕ್ರಮವನ್ನು ಮಧುಮೇಹ/ಸಕ್ಕರೆ ಖಾಯಿಲೆ/ರೋಗಿಗಳಿಗಾಗಿ ಹಮ್ಮಿಕೊಂಡಿದ್ದಾರೆ.

ನಗರದ ಧನ್ವಂತರಿ ರಸ್ತೆಯ ಶ್ರೀ ಜಯಚಾಮರಾಜೇಂದ್ರ ಭಾರತೀಯ ವೈದ್ಯಕೀಯ ಸಂಸ್ಥೆಯ ಆವರಣದಲ್ಲಿ ಈ ಉಚಿತ ಯೋಗ ಶಿಬಿರ ಹಾಗೂ ಆರೋಗ್ಯ ತಿಳುವಳಿಕೆ ಕಾರ್ಯಕ್ರಮವನ್ನು ದಿನಾಂಕ: 06–08–2018 ರಿಂದ 10–08–2018 ರವರೆಗೆ ಐದು ದಿನಗಳಿಗೆ ಹಮ್ಮಿಕೊಳ್ಳಲಾಗಿದೆ.

ಆಸಕ್ತ ಅಭ್ಯರ್ಥಿಗಳು, ರೋಗಿಗಳು ಆಗಸ್ಟ್ 6 ರೊಳಗೆ ಮೊದಲೆ ಒಳರೋಗಿಗಳ ವಿಭಾಗದಲ್ಲಿ ಆಸ್ಪತ್ರೆಗೆ ದಾಖಲಾಗಬೇಕು. ಪ್ರತಿದಿನ ಬೆಳಿಗ್ಗೆ 7.00 ರಿಂದ 8.00 ಗಂಟೆಯವರೆಗೆ "ಯೋಗಭ್ಯಾಸ" ಮಧ್ಯಾಹ್ನ 1.00 ರಿಂದ 1.30 ಗಂಟೆಗೆ "ಪ್ರಾಣಾಯಮ" ಹಾಗೂ 3.00 ರಿಂದ 4.00 ಗಂಟೆಯವರೆಗೆ "ಆರೋಗ್ಯ ಅರಿವು" ತಿಳುವಳಿಕಾ ಕಾರ್ಯಕ್ರಮ ಇರುತ್ತದೆ.

ಉಚಿತ ರಸ್ತೆ ತಪಾಸಣೆಗೆ ಹಾಗೂ ಸಾಮಾನ್ಯ ಒಳರೋಗಿ ವಿಭಾಗದಲ್ಲಿ ದಾಖಲಾಗಲು ಯಾವುದೇ ಶುಲ್ಕವಿರುವುದಿಲ್ಲ. ಆಸಕ್ತ ಅರ್ಹ ಸಕ್ಕರೆ ಖಾಯಿಲೆಯ ರೋಗಿಗಳು ಇದರ ಸದುಪಯೋಗವನ್ನು ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ರಕ್ಷಣಾ ಪಿಂಚಣಿ ಅದಾಲತ್

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಡಿಫೆನ್ಸ್ ಪೆನ್‌ಶನ್ ಡಿಬ್‌ಬರ್ಸಿಂಗ್ ಆಫೀಸ್ (ಡಿಪಿಡಿಒ) ವತಿಯಿಂದ ಜುಲೈ 31 ರಂದು ರಕ್ಷಣಾ ಇಲಾಖೆಯ "ಕಿರು–ಪಿಂಚಣಿ ಅದಾಲತ್" ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ನಗರದ ಡಿಕನ್ಸನ್ ರಸ್ತೆಯ ಡಿಫೆನ್ಸ್ ಪೆನ್‌ಶನ್ ಡಿಬ್‌ಬರ್ಸಿಂಗ್ ಆಫೀಸ್ (ಡಿಪಿಡಿಒ) ಆವರಣದಲ್ಲಿ ಪ್ರತಿ ತಿಂಗಳ ಕೊನೆಯ ಕಚೇರಿ ದಿನದಂದ ಹಮ್ಮಿಕೊಳ್ಳುತ್ತಾರೆ.

ಈ ಅದಾಲತ್‌ನ್ನು 2018 ರ ಜುಲೈ ತಿಂಗಳಿನಿಂದಲೇ ಪ್ರಾರಂಭಿಸಿದ್ದು, ಮೊದಲನೆ ಕಿರು ಪಿಂಚಣಿ ಅದಾಲತ್" ನ್ನು ಜುಲೈ 31 ರಂದು ಬೆಳಿಗ್ಗೆ 10.00 ರಿಂದ ಸಂಜೆ 5.00 ಗಂಟೆವರೆಗೆ ಆಯೋಜಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ರಕ್ಷಣಾ ಪಿಂಚಣಿ/ಕುಟುಂಬ ಪಿಂಚಣಿದಾರರು, ತಮ್ಮ ಪಿಂಚಣಿಯನ್ನು ಬ್ಯಾಮಕ್ ಅಥವಾ ಡಿಪಿಡಿಒ ದಿಂದ ಪಡೆಯುತ್ತಿದ್ದಲ್ಲಿ ಅದಾಲತ್‌ನಲ್ಲಿ ಭಾಗವಹಿಸಿ ತಮ್ಮ ಪಿಂಚಣಿಗೆ ಸಂಬಂಧಿಸಿದ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ. ಸಂಬಂಧಿಸಿದ ಅಭಿಲೇಖ ಕಾರ್ಯಾಲಯ, ಬ್ಯಾಂಕ್ ಹಾಗೂ ಪಿಂಚಣಿ ಮಂಜೂರಾತಿ ಪ್ರಾಧಿಕಾರದೊಂದಿಗೆ ಸಮನ್ವಯ ಮಾಡಿಕೊಂಡು ಪಿಂಚಣಿಗೆ ಸಂಬಂದಿಸಿದ ಕುಂದುಕೊರತೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಪ್ರಕಟಣೆ ತಿಳಿಸಿದೆ.

## ಕಬ್ಬನ್ ಉದ್ಯಾನದಲ್ಲಿ ಈ ಭಾನುವಾರ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತುನಡಿಗೆದಾರರ ಅನಜುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ದಿನಾಂಕ: 29–07–2018 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕಾಒಲ್ಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿರು ಮತ್ತು ನಡೆಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

   **I.** ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ: ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ ಸಂಸ್ಥೆಯ ಸಹಯೋಗದೊಂದಿಗೆ ಜ್ಯೋತಿ ಹೆಡ್ಗೆ ರವರಿದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## <u>ಎಸಿಬಿ ದಾಳಿ</u>

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಇಂದು ಭ್ರಷ್ಟಾಚಾರ ನಿಗ್ರಹ ದಳವು ನವನೀತ್ ಮೋಹನ್, ಕಾರ್ಖಾನೆಗಳ ಉಪ ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರ್ಸ್, ಕೈಗಾರಿಕಾ ಸುರಕ್ಷಾ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು ಎಂಬುವವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿ–ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿ ಗಳಿಕೆ ಪ್ರಕರಣಗಳನ್ನು ದಾಖಲಿಸಿ ಅವರು ವಾಸಿಸುತ್ತಿರುವ ಮನೆಯಾದ 1) ಬೆಂಗಳೂರು ಗಂಗಾನಗರದ ವಾಸದ ಮನೆ 2) ಬೆಂಗಳೂರು ಆರ್.ಟಿ.ನಗರ, ಶಾಂಪುರದಲ್ಲಿರುವ ಮನೆ ಹಾಗೂ 3) ಆಪಾದಿತ ಅಧಿಕಾರಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಮೇಲೆ ದಾಳಿ ನಡೆಸಲಾಗಿರುತ್ತದೆ.

ಎಸಿಬಿ ಬೆಂಗಳೂರು ನಗರ ಠಾಣೆಯ ತಂಡಗಳಿಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ಧ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ–ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

## ACB RIDE

Bengaluru, July 27: (Karnataka Information)

Today ACB has conducted raids over the properties of Shri. Navaneeth Mohan, Deputy Director of Factories, Department of Factories, Boilers,

Industrial Safety and Health, Karmika Bhavan, Bannerghatta Road, Bengaluru who is belived to have amassed disproportionate assets beyond his known sources of income. Raids were conducted at his 1] Ganganagar residence, 2] Shampura, R.T.Nagar residence and Office.

A Case against the official mentioned above is registered at ACB Bengaluru City Police station. Search and verification of properties by the ACB teams is continued to find out the source of income and other possible places for the search.

## ಹುತಾತ್ಮರ ಅವಲಂಬಿತರ ಅರ್ಜಿ ಇತ್ಯರ್ಥಕ್ಕೆ 15 ದಿನ ಗಡುವು

## ಜಿಲ್ಲಾಧಿಕಾರಿಗಳಿಗೆ ಕಂದಾಯ ಸಚಿವ ದೇಶಪಾಂಡೆ ಸೂಚನೆ

**ಬೆಂಗಳೂರು, ಜುಲೈ 27, 2018**-

ದೇಶದ ರಕ್ಷಣೆಯ ಸಲುವಾಗಿ ಪ್ರಾಣ ತ್ಯಾಗ ಮಾಡಿ ಹುತಾತ್ಮರಾಗಿರುವ ರಕ್ಷಣಾ ಸಿಬ್ಬಂದಿಯ ನೇರ ಅವಲಂಬಿತರು ಜಮೀನು/ನಿವೇಶನ ಅಥವಾ ಆರ್ಥಿಕ ಪರಿಹಾರ ಕೋರಿ ಸಲ್ಲಿಸಿರುವ ಅರ್ಜಿಗಳನ್ನು ಇನ್ನು 15 ದಿನಗಳಲ್ಲಿ ಇತ್ಯರ್ಥ ಪಡಿಸಬೇಕೆಂದು ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಆರ್ವಿ ದೇಶಪಾಂಡೆ ಅವರು ಎಲ್ಲಾ ಜಿಲ್ಲಾಧಿಕಾರಿಗಳಿಗೂ ಸೂಚಿಸಿದ್ದಾರೆ.

ಇಂತಹ ಅರ್ಜಿಗಳು ಇತ್ಯರ್ಥ ಕಾಣದೆ, ಬಹಳ ವರ್ಷಗಳಿಂದ ನನೆಗುದಿಗೆ ಬಿದ್ದಿರುವ ಬಗ್ಗೆ ದಿನ ಪತ್ರಿಕೆಗಳಲ್ಲಿ ಪ್ರಕಟವಾದ ವರದಿಯನ್ನು ಆಧರಿಸಿ, ಲೋಕಾಯುಕ್ತರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿರುವುದನ್ನು ಶ್ಲಾಘಿಸಿರುವ ಸಚಿವರು, ಈ ಕಾಲಮಿತಿಯನ್ನು ವಿಧಿಸಿದ್ದಾರೆ.

ಜತೆಗೆ, ರಾಜ್ಯದ ಯಾವ್ಯಾವ ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳು ಬಾಕಿ ಇವೆಯೋ ಅವುಗಳನ್ನು ಪರಿಶೀಲಿಸಿ ಪ್ರಕರಣದ ವಸ್ತುಸ್ಥಿತಿ, ಅದು ಎಷ್ಟು ಕಾಲದಿಂದ ಬಾಕಿ ಇದೆ, ಮತ್ತು ಬಾಕಿ ಇರಲು ಕಾರಣವಾಗಿರುವ ಅಂಶಗಳೇನು ಎಂಬ ಬಗ್ಗೆ ಸಮಗ್ರ ವಿವರಗಳನ್ನುಳ್ಳ ವರದಿಯನ್ನು ತುರ್ತಾಗಿ ತಮಗೆ ಸಲ್ಲಿಸುವಂತೆಯೂ ಸಚಿವರು ಹೇಳಿದ್ದಾರೆ.

ಅಲ್ಲದೆ, ಜುಲೈ 30 ಮತ್ತು 31ರಂದು ನಡೆಯಲಿರುವ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗಿನ ಸಭೆಯಲ್ಲಿ ಈ ವಿಚಾರದ ಬಗ್ಗೆ ಗಮನಹರಿಸಲಾಗುವುದು ಎಂದು ಸಚಿವ ದೇಶಪಾಂಡೆ ಅವರು ತಿಳಿಸಿದ್ದಾರೆ.

# ತಾತ್ಕಾಲಿಕ ಆಯ್ಕೆಪಟ್ಟಿ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 22–6–2017 ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ್ದ ಜಲಸಂಪನ್ಮೂಲ ಇಲಾಖೆಯ ಸಹಾಯಕ ಅಭಿಯಂತರರ (ಮೆಕ್ಯಾನಿಕಲ್) ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 26–7–2018 ರಂದು ಆಯೋಗದ ವೆಬ್‌ಸೈಟ್" http://kpsc.kar.nic.in/selection list ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ದಿನಾಂಕ: 01–08–2018 ರಂದು ಕಛೇರಿ ಅವಧಿಯೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –560 001 ಇವರಿಗೆ ತಲುಪುವಂತೆ ಸಲ್ಲಿಸಬಹುದೆಂದು ಆಯೋಗದ ಪ್ರಕಟಣೆ ತಿಳಿಸಿದೆ.